ಕರ್ನಾಟಕ ಸರ್ಕಾರ

ಏಪ್ರಿಲ್ 10, 2017

# ಅಂಗನವಾಡಿ ಕಾರ್ಯಕರ್ತರ ಬೇಡಿಕೆಗಳಿಗೆ ಸ್ಪಂದಿಸಿದ ರಾಜ್ಯ ಸರ್ಕಾರ, ರಾಜ್ಯ ಆಯವ್ಯಯದಲ್ಲಿ ಘೋಷಿಸಿದ ಒಂದು ಸಾವಿರ ರೂ ಗೌರವ ಧನ ಏರಿಕೆಯ ಜೊತೆಗೆ ಒಂದು ಸಾವಿರ ರೂಪಾಯಿ ಮತ್ತೆ ಹೆಚ್ಚಳ : ಸಿದ್ದರಾಮಯ್ಯ



**ಬೆಂಗಳೂರು, ಏಪ್ರಿಲ್ 10:**

ಅಂಗನವಾಡಿ ಕಾರ್ಯಕರ್ತರ ಬೇಡಿಕೆಗಳಿಗೆ ಸ್ಪಂದಿಸಿರುವ ರಾಜ್ಯ ಸರ್ಕಾರ 2017-18 ನೇ ಸಾಲಿನ ರಾಜ್ಯ ಆಯವ್ಯಯದಲ್ಲಿ ಘೋಷಿಸಿದ ಒಂದು ಸಾವಿರ ರೂ ಗೌರವ ಧನ ಏರಿಕೆಯ ಜೊತೆಗೆ ಮತ್ತೆ ಒಂದು ಸಾವಿರ ರೂಪಾಯಿ ಹೆಚ್ಚಳ ಮಾಡಿ, ಸಮಾಜದ ಕೆಳಸ್ತರದ ಕುಟುಂಬಗಳ ಮಕ್ಕಳ ಲಾಲನೆ-ಪಾಲನೆ ಮಾಡುವ ಮಹಾ ಮಾತೆಯರ ಬಹುದಿನಗಳ ಬೇಡಿಕೆಯನ್ನು ಈಡೇರಿಸಿದಂತಾಗಿದೆ.

ರಾಜ್ಯ ಸರ್ಕಾರದ ಈ ಕ್ರಮದಿಂದ ಈ ಸಾಲಿನಿಂದಲೇ ಅಂಗನವಾಡಿ ಕಾರ್ಯಕರ್ತರಿಗೆ ಎರಡು ಸಾವಿರ ರೂ, ಅಂಗನವಾಡಿ ಸಹಾಯಕರಿಗೆ ಒಂದು ಸಾವಿರ ರೂ ಹಾಗೂ ಕಿರು ಅಂಗನವಾಡಿ ಕಾರ್ಯಕರ್ತರಿಗೆ ಐದು ನೂರು ರೂ ಮಾಸಿಕ ಗೌರವ ಧನದಲ್ಲಿ ಹೆಚ್ಚಳವಾಗಲಿದೆ.

ಅಂಗನವಾಡಿ ಕಾರ್ಯಕರ್ತರ ಸಂಘದ ಪದಾಧಿಕಾರಿಗಳೊಡನೆ ಸುದೀರ್ಘ ಸಭೆ ನಡೆಸಿದ ನಂತರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಲ್ಲಿ ಇಂದು ಈ ವಿಷಯವನ್ನು ಬಹಿರಂಗಪಡಿಸಿದರು.

ತಮ್ಮ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಕಳೆದ ಮಾರ್ಚ್ 21 ರಿಂದ 24 ರ ವರೆಗೆ ಅಂಗನವಾಡಿ ಕಾರ್ಯಕರ್ತರು ನಡೆಸಿದ ಅಹೋ ರಾತ್ರಿ ಧರಣಿಯನ್ನು ಹಿಂಪಡೆದು, ಏಪ್ರಿಲ್ 10 ರಂದು ನಡೆಯುವ ಸಭೆಯಲ್ಲಿ ಪಾಲ್ಗೊಳ್ಳುವಂತೆ ಮುಖ್ಯಮಂತ್ರಿಯವರು ಮಾಡಿದ ಮನವಿ ಹಾಗೂ ನೀಡಿದ ಮುಕ್ತ ಆಹ್ವಾನದಂತೆ ಅಂಗನವಾಡಿ ಕಾರ್ಯಕರ್ತರ ಸಂಘದ ಪದಾಧಿಕಾರಿಗಳು

ಈ ದಿನದ ಸಭೆಯಲ್ಲಿ ಭಾಗವಹಿಸಿ ತಮ್ಮ ಬೇಡಿಕೆಗಳನ್ನು ಮಂಡಿಸಿದಾಗ, ಎಲ್ಲಾ ಬೇಡಿಕೆಗಳನ್ನು ಮುಕ್ತ–ಮನಸ್ಸಿನಿಂದ ಆಲಿಸಿ ಸಹಾನುಭೂತಿಯಿಂದ ಪರಿಗಣಿಸಿದ ಸಿದ್ದರಾಮಯ್ಯ ಅವರು ಅದರಲ್ಲಿ ಗೌರವ ಧನ ಹೆಚ್ಚಳ ಕುರಿತ ಪ್ರಮುಖ ಬೇಡಿಕೆಯ ಬಗ್ಗೆ ರಾಜ್ಯ ಸರ್ಕಾರದ ನಿಲುವನ್ನು ಪ್ರಕಟಿಸಿದರು. ಉಳಿದ ಬೇಡಿಕೆಗಳನ್ನು ಸರ್ಕಾರದ ಮಟ್ಟದಲ್ಲಿ ಹಾಗೂ ಇಲಾಖಾ ಮಟ್ಟದಲ್ಲಿ ಪರಿಶೀಲಿಸುವಂತೆ ಮುಖ್ಯಮಂತ್ರಿ ಅಧಿಕಾರಿಗಳಿಗೆ ಸೂಚಿಸಿದರು. ಅಂತೆಯೇ, ಗೌರವ ಧನ ಹೆಚ್ಚಳಕ್ಕೆ ಮುಂದಿನ ವರ್ಷವೂ ಇದೇ ರೀತಿ ದಯಮಾಡಿ ಬೇಡಿಕೆ ಇಡಬೇಡಿ ಎಂದು ಅಂಗನವಾಡಿ ಕಾರ್ಯಕರ್ತರು ಹಾಗೂ ಅಂಗನವಾಡಿ ಸಹಾಯಕರಲ್ಲಿ ಸಿದ್ದರಾಮಯ್ಯ ಅವರು ಮನವಿ ಮಾಡಿದರು.

ಸರ್ಕಾರದ ಈ ನಿರ್ಧಾರದಿಂದ ಪ್ರತಿ ಅಂಗನವಾಡಿ ಕಾರ್ಯಕರ್ತರ ಗೌರವ ಧನ ಎಂಟು ಸಾವಿರ ರೂ ಆಗಲಿದೆ. ಇದರಲ್ಲಿ ರಾಜ್ಯ ಸರ್ಕಾರದ ಪಾಲು 6200 ರೂ ಹಾಗೂ ಕೇಂದ್ರ ಸರ್ಕಾರದ ಪಾಲು ಕೇವಲ 1800 ರೂ ! ರಾಜ್ಯದಲ್ಲಿ ಹಿಂದಿನ ಸರ್ಕಾರದಲ್ಲಿ ಒಮ್ಮೆ 500 ರೂ ಹಾಗೂ ಮತ್ತೊಮ್ಮೆ 250 ರೂ ಹೀಗೆ ಗೌರವ ಧನದ ಮೊತ್ತದಲ್ಲಿ ಒಟ್ಟಾರೆ 750 ರೂ ಏರಿಕೆಯಾಗಿತ್ತು. ತಮ್ಮ ಸರ್ಕಾರವು ಅಸ್ತಿತ್ವಕ್ಕೆ ಬಂದ ದಿನದಿಂದ ಅಂಗನವಾಡಿ ಕಾರ್ಯಕರ್ತರ ಗೌರವಧನ 4400 ರೂ ಹೆಚ್ಚಳವಾಗಿದೆ ಎಂಬುದು ಗಮನಾರ್ಹ ಎಂದು ಮುಖ್ಯಮಂತ್ರಿ ವಿವರಿಸಿದರು.

ಮುಖ್ಯಮಂತ್ರಿಯವರ ನಿರ್ಧಾರವನ್ನು ಸ್ಥಳದಲ್ಲೇ ಹಾಜರಿದ್ದ ಸಂಘದ ಪದಾಧಿಕಾರಿಗಳು ಒಕ್ಕೊರಲಿನಿಂದ ಸ್ವಾಗತಿಸಿದಲ್ಲದೆ ಮಹತ್ವಯುತ ಈ ನಿರ್ಧಾರಕ್ಕೆ ಸಂತಸ ವ್ಯಕ್ತಪಡಿಸಿ, ಸಿದ್ದರಾಮಯ್ಯ ಅವರಿಗೆ ಅಭಿನಂದನೆ ಸಲ್ಲಿಸಿದರು.

**ಕೇಂದ್ರ ಸರ್ಕಾರದ ಕೂಸು !**

ಶಾಲಾ ಪೂರ್ವ ಶಿಕ್ಷಣ ಹಾಗೂ ಪೌಷ್ಠಿಕಾಂಶಯುಕ್ತ ಆಹಾರ ಒದಗಿಸಿ ಮಕ್ಕಳ ಭೌತಿಕ ಹಾಗೂ ಬೌದ್ಧಿಕ ಬೆಳವಣಿಗೆಗಾಗಿ 1975 ರಲ್ಲಿ ರೂಪುಗೊಂಡ ಸಮಗ್ರ ಶಿಶು ಅಭಿವೃದ್ಧಿ ಯೋಜನೆ ಕೇಂದ್ರ ಸರ್ಕಾರದ ಕೂಸು ! ಅಂಗನವಾಡಿ ಕಾರ್ಯಕರ್ತರಿಗೆ ವೇತನ ಅಲ್ಲ ಗೌರವ ಧನ ನೀಡಲು ನಿಯಮಗಳನ್ನು ರೂಪಿಸಿದ ಕೇಂದ್ರ ಸರ್ಕಾರ ಯೋಜನೆಯ ಮೊದಮೊದಲು ಗೌರವ ಧನದ ಶೇಕಡಾ 90 ರಷ್ಟು ಅನುದಾನವನ್ನು ನೀಡುತ್ತಿತ್ತು. ಉಳಿದ ಶೇಕಡಾ 10 ರಷ್ಟು ಗೌರವ ಧನವನ್ನು ರಾಜ್ಯ ಸರ್ಕಾರ ಭರಿಸುತ್ತಿತ್ತು. ಆದರೆ, 2015–16 ನೇ ಸಾಲಿನಿಂದ ಕೇಂದ್ರ ಸರ್ಕಾರವು ಗೌರವಧನಕ್ಕಾಗಿ ನೀಡುತ್ತಿದ್ದ ಅನುದಾನದ ಅನುಪಾತವನ್ನು ತೀವ್ರವಾಗಿ ಕಡಿತಗೊಳಿಸಿದಾಗ ಗೌರವಧನದ ಅನುಪಾತದ ಪ್ರಮಾಣ ಶೇಕಡಾ 60 ಹಾಗೂ ಶೇಕಡಾ 40 ಕ್ಕೆ ಕುಸಿಯಿತು.

ಇದೀಗ ಅಂಗನವಾಡಿ ಕಾರ್ಯಕರ್ತರ ಗೌರವ ಧನಕ್ಕಾಗಿ ಕೇಂದ್ರ ಸರ್ಕಾರ ಒದಗಿಸುತ್ತಿರುವ ಅನುದಾನದ ಅನುಪಾತದ ಪ್ರಮಾಣ ಶೇಕಡಾ 22.5 ಕ್ಕೆ ಕುಸಿದಿದೆ.

ಕನ್ನಡ ಮತ್ತು ಸಂಸ್ಕೃತಿ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಉಮಾಶ್ರೀ, ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿ ಎಲ್. ಕೆ. ಅತೀಕ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸರ್ಕಾರದ ಕಾರ್ಯದರ್ಶಿ ಉಮಾ ಮಹಾದೇವನ್ ಅವರೂ ಸೇರಿದಂತೆ ಹಿರಿಯ ಅಧಿಕಾರಿಗಳು ಹಾಗೂ ಅಂಗನವಾಡಿ ಕಾರ್ಯಕರ್ತರ ವಿವಿಧ ಸಂಘಟನೆಗಳ ಪದಾಧಿಕಾರಿಗಳು ಈ ಸಭೆಯಲ್ಲಿ ಭಾಗವಹಿಸಿದ್ದರು.

*******

ಡಿ ಪಿ ಎಂ : ಟಿ ಸಿ ಎಂ ಬಿ